## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಬೆಂಗಳೂರಿನ ನಾಗರತ್ನ ಶ್ರೀಕಂಠಯ್ಯ ಪ್ಯಾರಾ ಮೆಡಿಕಲ್ ಕಾಲೇಜಿಗೆ ಮಂಜೂರಾತಿ.

**ಓದಲಾಗಿದೆ:** ದಿನಾಂಕ 08-11-2005 ಸಂಖ್ಯೆ: ಪಿಎಂಬಿ/21/05-06ರ ಪ್ಯಾರಾ ಮೆಡಿಕಲ್ ಬೋರ್ಡ್‌ನ ಸದಸ್ಯ ಕಾರ್ಯದರ್ಶಿಯವರ ಪತ್ರ.

**ಪ್ರಸ್ತಾವನೆ:**

1) ಬೆಂಗಳೂರಿನ ನಾಗರತ್ನ ಶ್ರೀಕಂಠಯ್ಯ ಪ್ಯಾರಾ ಮೆಡಿಕಲ್ ಕಾಲೇಜಿಗೆ ಡಿಪ್ಲೊಮ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ ಮತ್ತು ಡಿಪ್ಲೊಮಾ ಇನ್ ಮೆಡಿಕಲ್ ಎಕ್ಸ್‌ರೇ ಟೆಕ್ನಾಲಜಿ ಕೋರ್ಸುಗಳೊಂದಿಗೆ ಮಂಜೂರಾತಿಗಾಗಿ ಅರ್ಜಿಯನ್ನು ಪ್ಯಾರಾ ಮೆಡಿಕಲ್ ಮಂಡಳಿಗೆ ಸಲ್ಲಿಸಲಾಗಿತ್ತು. ಮಂಡಳಿಯು ವಿಷಯ ತಜ್ಞರ ತಂಡವನ್ನು ರಚಿಸಿ ಮೇಲ್ಕಂಡ ಕೋರ್ಸುಗಳನ್ನು ಸಂಸ್ಥೆಯು ನಡೆಸಲು ಹೊಂದಿರುವ ಮೂಲಭೂತ ಸೌಕರ್ಯಗಳನ್ನು ಪರಿವೀಕ್ಷಿಸಿ ಅದರ ವರದಿಯನ್ನು ಸಲ್ಲಿಸಲು ಸೂಚಿಸಿತ್ತು. ತಜ್ಞರ ತಂಡವು ಸಂಸ್ಥೆಯನ್ನು ದಿನಾಂಕ 14-07-2005ರಂದು ಭೇಟಿ ನೀಡಿ ಪರಿವೀಕ್ಷಿಸಿ ಅದರ ವರದಿಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಮಂಡಳಿಗೆ ಸಲ್ಲಿಸಿತ್ತು. ತಜ್ಞರ ತಂಡದ ಪರಿವೀಕ್ಷಣ ವರದಿಯನ್ನು ದಿನಾಂಕ 14-10-2005ರಂದು ನಡೆದ ಅರೆ ವೈದ್ಯಕೀಯ ಮಂಡಳಿಯ ಸಭೆಯಲ್ಲಿ ವಿಶ್ಲೇಷಿಸಿ ಮೇಲ್ಕಂಡ ಕಾಲೇಜನ್ನು ಮಂಜೂರು ಮಾಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಸರ್ಕಾರದ ಆದೇಶವನ್ನು ಹೊರಡಿಸುವಂತೆ ಮೇಲೆ ಓದಲಾದ ಪತ್ರದನ್ವಯ ಪ್ಯಾರಾ ಮೆಡಿಕಲ್ ಬೋರ್ಡಿನ ಸದಸ್ಯ ಕಾರ್ಯದರ್ಶಿರವರು ಕೋರಿರುತ್ತಾರೆ.

2) ಪ್ರಕರಣವನ್ನು ಸಕಲ ವಲಯಗಳಿಂದ ಪರಿಶೀಲಿಸಲಾಗಿ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 269 ಎಂಎಂಇ 2005, ಬೆಂಗಳೂರು, ದಿನಾಂಕ:07-07-2006**

3) ಬೆಂಗಳೂರಿನ ನಾಗರತ್ನ ಶ್ರೀಕಂಠಯ್ಯ ಪ್ಯಾರಾ ಮೆಡಿಕಲ್ ಕಾಲೇಜನ್ನು ತಲಾ 20 (ಇಪ್ಪತ್ತು) ವಿದ್ಯಾರ್ಥಿಗಳ ಪ್ರವೇಶ ಮಿತಿಯ **ಡಿಪ್ಲೊಮ ಇನ್ ಮೆಡಿಕಲ್ ಲ್ಯಾಬ್ ಟೆಕ್ನಾಲಜಿ** ಮತ್ತು **ಡಿಪ್ಲೊಮಾ ಇನ್ ಮೆಡಿಕಲ್ ಎಕ್ಸ್‌ರೇ ಟೆಕ್ನಾಲಜಿ** ಕೋರ್ಸುಗಳೊಂದಿಗೆ 2005-06ನೇ ಶೈಕ್ಷಣಿಕ ವರ್ಷದಿಂದ ಜಾರಿಗೆ ಬರುವಂತೆ ಪ್ರಾರಂಭಿಸಲು ಮಂಜೂರಾತಿ ನೀಡಿದೆ. ಸದರಿ ಮಂಜೂರಾತಿಯು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

### ಷರತ್ತುಗಳು

(1) ಸಂಸ್ಥೆಯು ಈ ಕೋರ್ಸುಗಳನ್ನು ಪ್ರಾರಂಭಿಸುವ ಮೊದಲು ಪೂರ್ಣ ಪ್ರಮಾಣದಲ್ಲಿ ಬೋಧಕ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳತಕ್ಕದ್ದು.

(2) ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸ್‌ಗೆ ಇಪ್ಪತ್ತು ಸಾವಿರ ರೂಪಾಯಿಗಳನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

(3) ಕಾಲೇಜನ್ನು ಪ್ರಾರಂಭ ಮಾಡುವ ಮೊದಲು ಬೋರ್ಡ್ ನಿಗಧಿಪಡಿಸಿದ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(4) ಸದರಿ ಕೋರ್ಸ್‌ಗಳಿಗೆ ವಿದ್ಯಾರ್ಥಿ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಘಟನಾವಳಿ ಪ್ರಕಾರ ಮಾಡಿಕೊಳ್ಳಬೇಕು.

(5) ಸದರಿ ಕೋರ್ಸಗಳಿಗೆ ಪ್ರವೇಶವನ್ನು ಆಯ್ಕೆಗೊಂಡ ವಿದ್ಯಾರ್ಥಿಗಳ ಪಟ್ಟಿಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಅನುಮೋದನೆಗೆ ಸಲ್ಲಿಸತಕ್ಕದ್ದು.

(6) ಪ್ಯಾರಾ ಮೆಡಿಕಲ್ ಕೋರ್ಸ್‌ಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ ನಿಗದಿತ ನೋಂದಣಿ ಶುಲ್ಕದೊಂದಿಗೆ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಅವರ ವಿದ್ಯಾರ್ಹತೆಯ ಪ್ರಮಾಣ ಪತ್ರದೊಂದಿಗೆ ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಲ್ಲಿಸತಕ್ಕದ್ದು.

(7) ಪ್ಯಾರಾ ಮೆಡಿಕಲ್ ಕೋರ್ಸ್‌ಗೆ ಪ್ರವೇಶ ಪಡೆಯಲು ಕನಿಷ್ಟ ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.

(8) ಪ್ಯಾರಾ ಮೆಡಿಕಲ್ ಕೋರ್ಸ್‌ಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಯಿಂದ ಸರ್ಕಾರ ಅಥವಾ ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.

(9) ಯಾವುದೇ ಸಂದರ್ಭದಲ್ಲಿ ಸರ್ಕಾರ ಮಂಜೂರಾತಿ ನೀಡಿದ ಪ್ರವೇಶ ಮಿತಿಗಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ.

(10) ನಿಗಧಿಪಡಿಸಿದ ಸೀಟುಗಳಲ್ಲಿ ಶೇ.20ರಷ್ಟನ್ನು ಅಥವಾ ಸರ್ಕಾರ ಕಾಲಕಾಲಕ್ಕೆ ನಿಗದಿಪಡಿಸುವಂತೆ ಸರ್ಕಾರದಿಂದ ಆಯ್ಕೆ ಮಾಡಿದ ಅಭ್ಯರ್ಥಿಗಳಿಗೆ ಪ್ರವೇಶ ನೀಡಲು ಸಂಸ್ಥೆಯು ಬದ್ಧವಾಗಿರತಕ್ಕದ್ದು.

(11) ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ನಿಯಮಾವಳಿಯಂತೆ, ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಯು ವಯೋಮಿತಿ, ಪಠ್ಯಕ್ರಮ, ಕೋರ್ಸಿನ ಅವಧಿ ಅಥವಾ ಪರೀಕ್ಷಾ ಕ್ರಮ ಮತ್ತು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಇತರೆ ನಿಯಮಗಳನ್ನು ಸಂಸ್ಥೆಯು ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸತಕ್ಕದ್ದು.

(12) ಕೋರ್ಸನ್ನು ಪ್ರಾರಂಭಿಸುವ ಮುನ್ನ ಸುಸಜ್ಜಿತ ತರಗತಿ ಕೊಠಡಿ, ಪ್ರಯೋಗಶಾಲೆ, ವಾಚನಾಲ, ವಿದ್ಯಾರ್ಥಿನಿಲಯ ಹಾಗೂ ಇತರೆ ಸೌಲಭ್ಯವನ್ನು ವಿದ್ಯಾರ್ಥಿಗಳಿಗೆ ಒದಗಿಸತಕ್ಕದ್ದು.

(13) ಮೂಲಭೂತ ಸೌಕರ್ಯಗಳ ಲಭ್ಯತೆಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು ಮೊದಲ ವರ್ಷದ ಪರೀಕ್ಷೆಯನ್ನು ತೆಗೆದುಕೊಳ್ಳುವ ಪೂರ್ವದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ವಿವೇಚನಾನುಸಾರ ಎರಡನೇ ಬಾರಿಗೆ ಸಂಸ್ಥೆಯನ್ನು ತಪಾಸಣೆಗೆ ಒಳಪಡಿಸಬಹುದು.

(14) ಮೇಲ್ಕಂಡ ಪ್ಯಾರಾ ಮೆಡಿಕಲ್ ಕಾಲೇಜಿಗೆ ಸರ್ಕಾರದಿಂದ ಯಾವುದೇ ಆರ್ಥಿಕ ನೆರವು ಅಥವಾ ಅನುದಾನವನ್ನು ನೀಡಲಾಗುವುದಿಲ್ಲ. ಅದು ಶಾಶ್ವತ ಅನುದಾನ ರಹಿತ ಕಾಲೇಜಾಗಿರುತ್ತದೆ.

(15) ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರಾ ಮಡಿಕಲ್ ಬೋರ್ಡ್ ನಿಗದಿಪಡಿಸಿದ ಮಾದರಿಯನ್ನು ಅನುಸರಿಸತಕ್ಕದ್ದು.

(16) ಪ್ಯಾರಾ ಮೆಡಿಕಲ್ ಕೋರ್ಸ್‌ನ ಅಂತ್ಯದಲ್ಲಿ ಪ್ಯಾರಾ ಮಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯನ್ನು ವಿದ್ಯಾರ್ಥಿಗಳು ತೆಗೆದುಕೊಂಡು ಉತ್ತೀರ್ಣರಾಗುವ ವಿಧ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಿಂದ ಪಡೆಯತಕ್ಕದ್ದು.

(17) ಪ್ರತಿ ತಪಾಸಣೆಗೆ ನಿಗದಿಪಡಿಸಿದ ಶುಲ್ಕವನ್ನು ಕಾಲೇಜು ಪ್ಯಾರಾ ಮೆಡಿಕಲ್ ಬೋರ್ಡ್‌ಗೆ ಸಂದಾಯ ಮಾಡತಕ್ಕದ್ದು.

(18) ದಿನಾಂಕ 30-03-1999 ಸಂಖ್ಯೆ: ಆಕುಕ 144 ಎಂಎಂಇ 98ರ ಸರ್ಕಾರಿ ಆದೇಶದಲ್ಲಿ ನಿರ್ದಿಷ್ಟಪಡಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

(19) ಕಾಲಕಾಲಕ್ಕೆ ಸರ್ಕಾರ ಮತ್ತು ವೈದ್ಯಕೀಯ ಶಿಕ್ಷಣ ನಿರ್ದೇಶಕರು ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ಹೊರಡಿಸುವ ಆದೇಶಗಳಿಗೆ ಸಂಸ್ಥೆಯು ಬದ್ಧವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಡಿ.ಬಿ.ಗಣಾಚಾರಿ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
07.07.06 (ವೈದ್ಯಕೀಯ ಶಿಕ್ಷಣ)

**<u>ಇವರಿಗೆ:</u>**

1) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತರು/ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು-560009.
2) ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು-560 009.
3) ಅಧ್ಯಕ್ಷರು/ಸದಸ್ಯ ಕಾರ್ಯದರ್ಶಿ, ಪ್ಯಾರಾ ಮೆಡಿಕಲ್ ಬೋರ್ಡ್, ಆನಂದ್‌ರಾವ್ ವೃತ್ತ, ಬೆಂಗಳೂರು-560009.
4) ಪ್ರಾಂಶುಪಾಲರು, ನಾಗರತ್ನ ಶ್ರೀಕಂಠಯ್ಯ ಪ್ಯಾರಾ ಮೆಡಿಕಲ್ ಕಾಲೇಜು, ನಂ.123, 13ನೇ ಕ್ರಾಸ್, ಮಾರ್ಗೋಸ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-03.
5) ಅಧ್ಯಕ್ಷರು/ಕಾರ್ಯದರ್ಶಿ, ಚಾನ್ರೆ ಫೌಂಡೇಷನ್, ನಂ.123, 13ನೇ ಕ್ರಾಸ್, ಮಾರ್ಗೋಸ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-03.
6) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು